**Akashvani : Bangalore**
**Regional Bulletin in Kannada**
**13.01.2026 / 2.30  hrs**
**ಆಕಾಶವಾಣಿ ಬೆಂಗಳೂರು**

**13.01.2026 / 2.30   hrs**
**<><*<><>*><>**

**ಮುಖ್ಯಾಂಶಗಳು**

**೧.	ವಿಕಸಿತ ಭಾರತ  ಜಿ ರಾಮ್ ಜಿ ಯೋಜನೆಯಿಂದ ರಾಜ್ಯದ ಬೊಕ್ಕಸಕ್ಕೆ ಎರಡೂವರೆ ಸಾವಿರ ಕೋಟಿ ರೂಪಾಯಿ ಹೊರೆ- ಮುಖ್ಯಮಂತ್ರಿ ಸಿದ್ದರಾಮಯ್ಯ**

**೨.	ನಿಗದಿತ ದಿನಾಂಕದೊಳಗೆ ಜಿಬಿಎ ಪಾಲಿಕೆಗಳಿಗೆ ಚುನಾವಣೆ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್**

**೩.	೨೦೨೫ರಲ್ಲಿ ೪ ಕೋಟಿ ೩೦ ಲಕ್ಷ ಪ್ರಯಾಣಿಕರ ದಾಖಲೆ ಬರೆದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ**

**೪.	ಅಂತರ್ ವಿಶ್ವವಿದ್ಯಾಲಯ ಕ್ರೀಡಾಕೂಟ; ರಾಜ್ಯಕ್ಕೆ ಇಂದು ಎರಡು ಬೆಳ್ಳಿ, ಒಂದು ಕಂಚಿನ ಪದಕ**

**<><*<><>*><>**

ಬೆಂಗಳೂರು ಅರಮನೆ ಮೈದಾನದಲ್ಲಿಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಮನ್ರೇಗಾ ಉಳಿಸಿ ಆಂದೋಲನ ಆಯೋಜನೆ, ಬಿಎಲ್‌ಎ ಪಟ್ಟಿ, ಸ್ಥಳೀಯ ಸಂಸ್ಥೆ ಚುನಾವಣೆ ಕುರಿತ ಪೂರ್ವಭಾವಿ ಸಭೆ ನಡೆಸಿತು. ಸಭೆಯನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಮನ್ರೇಗಾ ಯೋಜನೆ ಕಳೆದ ೨೦ ವರ್ಷದಿಂದ ಜಾರಿಯಲ್ಲಿದ್ದು, ಈ ಯೋಜನೆಯಡಿಯಲ್ಲಿ ದೇಶಾದ್ಯಂತ ೧೨ ಕೋಟಿ ೧೬ ಲಕ್ಷ ಕಾರ್ಮಿಕರು ಕಾರ್ಯ ನಿರ್ವಹಿಸುತ್ತಿದ್ದರು. ರಾಜ್ಯ ಸರ್ಕಾರ ನೂತನ ಯೋಜನೆಗೆ ಶೇಕಡಾ ೪೦ ರಷ್ಟು ಹಣ ನೀಡಲಿದೆ. ಇದರಿಂದ ವಾರ್ಷಿಕವಾಗಿ ಸರ್ಕಾರದ ಬೊಕ್ಕಸಕ್ಕೆ ಎರಡೂವರೆ ಸಾವಿರ ಕೋಟಿ ರೂಪಾಯಿ ಹೊರೆಯಾಗಲಿದೆ ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಎಐಸಿಸಿ ಕಾರ್ಯದರ್ಶಿಗಳಾದ ಗೋಪಿನಾಥ್ ಪಳನಿಯಪ್ಪನ್, ಮಯೂರ್ ಜೈಕುಮಾರ್, ಸಚಿವರಾದ ಕೆ ಜೆ ಜಾರ್ಜ್, ಕೆ ಎಚ್ ಮುನಿಯಪ್ಪ, ಪ್ರಿಯಾಂಕ್ ಖರ್ಗೆ, ರಾಮಲಿಂಗಾರೆಡ್ಡಿ, ಕೃಷ್ಣ ಬೈರೇಗೌಡ ಸೇರಿದಂತೆ ಹಲವು ಮುಖಂಡರು ಭಗವಹಿಸಿದ್ದರು.

**<><*<><>*><>**

'ವಿಕಸಿತ ಭಾರತ ಜಿ ರಾಮ್ ಜಿ' ಕಾಯ್ದೆ ಜಾರಿಗೊಳಿಸಿರುವ ಸಂಬಂಧ ಚರ್ಚಿಸಲು ಹಾಗೂ ಜಂಟಿ ಅಧಿವೇಶನ ನಡೆಸಲು ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದೆ. ಕೇಂದ್ರ ಸರ್ಕಾರ ಮನ್ರೇಗಾ ಯೋಜನೆ ಬದಲಿಸಿ 'ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆ' ಜಾರಿಗೊಳಿಸಿದೆ. ಮನ್ರೇಗಾ ಯೋಜನೆ ರದ್ದತಿ ವಿರುದ್ಧ ಕಾಂಗ್ರೆಸ್ ಗ್ರಾಮೀಣ ಮಟ್ಟದಲ್ಲಿ ಹೋರಾಟ ನಡೆಸಲು ಮುಂದಾಗಿದೆ. ಈ ಹಿನ್ನೆಲೆಯಲ್ಲಿ ಇದೇ ತಿಂಗಳು ಎರಡು ದಿನಗಳ ಕಾಲ ವಿಶೇಷ ಅಧಿವೇಶನ ನಡೆಸುವ ಕುರಿತಂತೆ ನಾಳಿನ ಸಂಪುಟ ಸಭೆಯಲ್ಲಿ ಚರ್ಚಿಸುವ ಸಾಧ್ಯತೆಯಿದೆ.

**<><*<><>*><>**

ಸುಪ್ರೀಂ ಕೋರ್ಟ್ ಆದೇಶದ ಅನುಸಾರ ನಿಗದಿತ ದಿನಾಂಕದ ಒಳಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಐದು ಪಾಲಿಕೆಗಳ ಚುನಾವಣೆ ನಡೆಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಂಬಂಧ ರಾಜ್ಯ ಚುನಾವಣಾ ಆಯೋಗಕ್ಕೆ ಅಗತ್ಯ ನಿರ್ದೇಶನ ನೀಡಲಾಗುವುದು ಎಂದು ಹೇಳಿದ್ದಾರೆ. ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿ ಚುನಾವಣೆಗಳು ನಡೆಯಬೇಕು ಎಂಬುದು ಸರ್ಕಾರದ ಉದ್ದೇಶವಾಗಿದೆ. ಯಾವುದೇ ಕಾರಣಕ್ಕೂ ನ್ಯಾಯಾಲಯದಲ್ಲಿ ಚುನಾವಣೆ ಮುಂದೂಡಲು ಕಾಲಾವಕಾಶ ಕೇಳುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ತಂತ್ರಜ್ಞಾನ ಇಂದು ಪ್ರತಿಯೊಂದು ಕ್ಷೇತ್ರಕ್ಕೆ ಅತೀ ಅಗತ್ಯವಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಭೋಸರಾಜು ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಪ್ರೊಫೆಸರ್ ಯು.ಆರ್.ರಾವ್ ವಿಜ್ಞಾನ ಭವನದಲ್ಲಿ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಿಂದ ಏರ್ಪಡಿಸಲಾಗಿದ್ದ ಕರ್ನಾಟಕ ಸರ್ಕಾರ ಪ್ರಶಸ್ತಿ ಮತ್ತು ಫೆಲೋಶಿಪ್ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ರಾಜ್ಯದಲ್ಲಿನ ವಿವಿಧ ಇಲಾಖೆಗಳಿಗೆ ಉನ್ನತ ಮಟ್ಟದಲ್ಲಿನ ತಂತ್ರಜ್ಞಾನದ ಅವಶ್ಯಕತೆ ಇದೆ ಎಂದು ಹೇಳಿದರು. ವಿಜ್ಞಾನ ಮತ್ತು ತಂತ್ರಜ್ಞಾನ ವಿಭಾಗಗಳಲ್ಲಿ ಸಾಧನೆಗೈದವರಿಗೆ ಸಚಿವ ಎನ್ ಎಸ್ ಭೋಸರಾಜು ಸನ್ಮಾನಿಸಿದರು.

<><*<><>*><>

ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮಹತ್ವದ ದಾಖಲೆ ಬರೆದಿದೆ. ೨೦೨೫ರಲ್ಲಿ ೪ ಕೋಟಿ ೩೦ ಲಕ್ಷ ಪ್ರಯಾಣಿಕರು ಓಡಾಟ ನಡೆಸಿದ್ದು, ಜಾಗತಿಕ ಮಟ್ಟದಲ್ಲಿ ಮೆಚ್ಚುಗೆಗೆ ಪಾತ್ರವಾಗಿದೆ. ಈ ಮೂಲಕ ಪ್ರಯಾಣಿಕರ ಸಂಖ್ಯೆಯಲ್ಲಿ ಶೇಕಡಾ ೮ರಷ್ಟು ಹೆಚ್ಚಳವಾಗಿದೆ. ೨೦೨೫ ನವೆಂಬರ್ ೨೩ರಂದು ೧ ಲಕ್ಷ ೩೭ ಸಾವಿರದ ೩೧೭ ಪ್ರಯಾಣಿಕರು ಬೆಂಗಳೂರಿನಿಂದ ತೆರಳುವ ಮೂಲಕ ದಾಖಲೆ ನಿರ್ಮಿಸಿದೆ. ೨೦೨೫ರ ಅಕ್ಟೋಬರ್ ೧೯ರಂದು ಗರಿಷ್ಠ ೮೩೭ ಏರ್‌ಟ್ರಾಫಿಕ್ ಮೂವ್‌ಮೆಂಟ್‌ಗಳಾಗಿದ್ದು, ೫ ಲಕ್ಷ ೨೦ ಸಾವಿರದ ೯೮೫ ಟನ್‌ಗಳನ್ನು ನಿರ್ವಹಿಸಿದೆ. ಈ ವಿಮಾನ ನಿಲ್ದಾಣವು, ಐದು ದೇಶೀಯ ಮತ್ತು ಐದು ಅಂತಾರಾಷ್ಟ್ರೀಯ ಸೇರಿ ಒಟ್ಟು ೧೦ ಹೊಸ ಮಾರ್ಗಗಳನ್ನು ಸೇರಿಸಿಕೊಂಡಿದೆ.

<><*<><>*><>

ಸಫಾಯಿ ಕರ್ಮಚಾರಿಗಳು ಹಾಗೂ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ನಿಯೋಜನೆ ನಿಷೇಧ ಮತ್ತು ಪುನರ್ವಸತಿ ಕಾಯ್ದೆಯ ಸಮರ್ಪಕ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಗದಗ ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ ಅಧ್ಯಕ್ಷತೆಯಲ್ಲಿ ಇಂದು ಸಭೆ ನಡೆಯಿತು. ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಯಾವುದೇ ಕಾರಣಕ್ಕೂ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್‌ಗೆ ಅವಕಾಶ ಕೊಡಬಾರದು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಫಾಯಿ ಕರ್ಮಚಾರಿಗಳಿಗೆ ಸರ್ಕಾರದಿಂದ ಲಭ್ಯವಿರುವ ಎಲ್ಲ ಸೌಲಭ್ಯಗಳು ಯಾವುದೇ ವಿಳಂಬವಿಲ್ಲದೆ ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಸೂಚಿಸಿದರು. ಇಎಸ್‌ಐ, ಪಿಎಫ್ ಸೇರಿದಂತೆ ಎಲ್ಲಾ ಭತ್ಯೆಗಳನ್ನು ಸಕಾಲಕ್ಕೆ ಪಾವತಿಸಬೇಕು. ಆರೋಗ್ಯ ರಕ್ಷಣೆಗೆ ವಿಶೇಷ ಒತ್ತು ನೀಡಬೇಕು ಎಂದು ನಿರ್ದೇಶನ ನೀಡಿದರು. ಜಿಲ್ಲೆಯ ಪ್ರತಿಯೊಂದು ತಾಲೂಕು ಮಟ್ಟದಲ್ಲಿ ಸಫಾಯಿ ಕರ್ಮಚಾರಿಗಳ ಸ್ಥಿತಿಗತಿ ಕುರಿತು ಪ್ರಗತಿ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದರು.

<><*<><>*><>

ಬೆಳಗಾವಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಶ್ರಯದಲ್ಲಿ ಇಂದು ಬೈಲಹೊಂಗಲ ತಾಲೂಕಿನ ಸಂಗೊಳ್ಳಿಯಲ್ಲಿ ನಡೆದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಉತ್ಸವಕ್ಕೆ ಶಾಸಕ ಮಹಾಂತೇಶ ಕೌಜಲಗಿ ಚಾಲನೆ ನೀಡಿದರು. ಇದೇ ವೇಳೆ ಮಾತನಾಡಿದ ಮಹಾಂತೇಶ ಕೌಜಲಗಿ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಕೀರ್ತಿ ಇಡೀ ದೇಶಕ್ಕೆ ಚಿರಪರಿಚಿತವಾಗಿದೆ. ಯುವ ಪೀಳಿಗೆ ದೇಶಾಭಿಮಾನ ಬೆಳಸಿಕೊಳ್ಳಬೇಕು ಎಂಬ ಉದ್ದೇಶದಿಂದ, ಸಂಗೊಳ್ಳಿ ರಾಯಣ್ಣನ ಹೋರಾಟ ಪರಿಚಯಿಸುವ ನಿಟ್ಟಿನಲ್ಲಿ ಸರ್ಕಾರ ಉತ್ಸವ ಆಯೋಜಿಸಿದೆ ಎಂದು ಹೇಳಿದ್ದಾರೆ.

<><*<><>*><>

ವಿಕಸಿತ ಭಾರತ ಉದ್ಯೋಗ ಖಾತರಿ ಮತ್ತು ಜೀವನೋಪಾಯ ಮಿಷನ್ ಗ್ರಾಮೀಣ ಯೋಜನೆ ಕುರಿತು ಅರಿವು ಮೂಡಿಸಲು ಇದೇ ೧೫ ರಿಂದ ಫೆಬ್ರವರಿ ೨೮ರವರೆಗೆ ರಾಜ್ಯವ್ಯಾಪಿ ಜನಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯ ಅಧ್ಯಕ್ಷ ಎ.ಎಸ್. ಪಾಟೀಲ ನಡಹಳ್ಳಿ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮನರೇಗಾ’ ಹೆಸರು ಬದಲಿಸಿ ಮಹಾತ್ಮಗಾಂಧಿ ಅವರನ್ನು ಅವಮಾನಿಸಲಾಗಿದೆ ಎಂಬುದಾಗಿ ಕಾಂಗ್ರೆಸ್ ಅಪಪ್ರಚಾರ ಮಾಡುತ್ತಿದೆ. ಯೋಜನೆಯ ವಾಸ್ತವ ತಿಳಿಸುವ ಸಲುವಾಗಿ ಜಿಲ್ಲಾ ಮಟ್ಟದಲ್ಲಿ ಸಮಾವೇಶ ನಡೆಸಲು ನಿರ್ಧರಿಸಲಾಗಿದೆ ಎಂದು ಹೇಳಿದ್ದಾರೆ. ’ರಾಜ್ಯದಲ್ಲಿ ’ಜಿರಾಮ್‌ಜಿ’ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಬೇಕು ಎಂದು ಆಗ್ರಹಿಸಿದ್ದಾರೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದಿರೆಯ ಸ್ವರಾಜ್ ಮೈದಾನದಲ್ಲಿ ನಡೆಯುತ್ತಿರುವ ಅಂತರ್ ವಿಶ್ವವಿದ್ಯಾಲಯ ಮಟ್ಟದ ೮೫ನೇ ಅಖಿಲ ಭಾರತ ಅಥ್ಲೆಟಿಕ್ ಚಾಂಪಿಯನ್ ಶಿಪ್ ಎರಡನೇ ದಿನಕ್ಕೆ ಕಾಲಿಟ್ಟಿದೆ. ಮಹಿಳೆಯರ ವಿಭಾಗದ ೮೦೦ ಮೀಟರ್ ಓಟದಲ್ಲಿ ಲವ್ಲಿ ಪ್ರೊಫೆಷನಲ್ ವಿಶ್ವವಿದ್ಯಾಲಯದ ಅಂಜು ಚಿನ್ನದ ಪದಕ ಗೆದ್ದಿದ್ದಾರೆ. ಗುರುನಾನಕ್ ದೇವ್ ವಿಶ್ವವಿದ್ಯಾಲಯದ ಅಂಜಲಿ ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟಿದ್ದಾರೆ. ಪುರುಷರ ವಿಭಾಗದ ೮೦೦ ಮೀಟರ್ ಓಟದಲ್ಲಿ ರೋಹ್ಟಕ್ ಎಂಡಿಯು ವಿಶ್ವವಿದ್ಯಾಲಯದ ಸಂಕೇತ್ ಚಿನ್ನದ ಪದಕ ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದ ಡಿಯೋರೆ ಪ್ರಥಮೆಸ್ ಅಮರಿಸ್ಲ್ ಬೆಳ್ಳಿ ಪದಕಕ್ಕೆ ಕೊರಳೊಡ್ಡಿದ್ದಾರೆ. ಪುರುಷರ ವಿಭಾಗದ ೨೦ ಕಿಲೋಮೀಟರ್ ನಡಿಗೆಯಲ್ಲಿ ಬೆಂಗಳೂರು ನಗರ ವಿಶ್ವವಿದ್ಯಾಲಯ ದಶರಥ ಸಿಂಗ್ ತಲವಾರ್ ಕಂಚಿನ ಪದಕ ಪಡೆದಿದ್ದಾರೆ. ಮಹಿಳೆಯರ ವಿಭಾಗದ ೨೦ ಕಿ.ಮೀ ನಡಿಗೆಯಲ್ಲಿ ಸಾವಿತ್ರಿ ಬಾಯಿ ಫುಲೆ ಪುಣೆ ವಿಶ್ವವಿದ್ಯಾಲಯದ ಚೌದರಿ ಗಾಯತ್ ಗಣೇಶ್ ಪ್ರಥಮಸ್ಥಾನ ಗಳಿಸಿದ್ದಾರೆ. ಪುರುಷರ ವಿಭಾಗದ ೧೦೦ ಮೀಟರ್ ಓಟದಲ್ಲಿ ಭಾರತಿಹಾರ್ ವಿಶ್ವವಿದ್ಯಾಲಯದ ಕರಣ್ ಬಿ ಚಿನ್ನ ಹಾಗೂ ಧಾರವಾಡ ವಿಶ್ವವಿದ್ಯಾಲಯದ ಪ್ರಸನ್ನ ಕುಮಾರ್ ಮನ್ನೂರು ಬೆಳ್ಳಿ ಪದಕ ಪಡೆದಿದ್ದಾರೆ.

<><*<><>*><>

ಸಾರ್ವಜನಿಕ ಕುಂದುಕೊರತೆ ಸಭೆಯಲ್ಲಿ ಸ್ವೀಕೃತವಾಗಿರುವ ಅರ್ಜಿಗಳಿಗೆ ಸಂಬಂಧಿಸಿದಂತೆ ನಿಯಮಾನುಸಾರ ಕ್ರಮವಹಿಸಿ ಜಿಲ್ಲಾ ಪಂಚಾಯತ್‌ಗೆ ವರದಿ ಸಲ್ಲಿಸುವಂತೆ ಮಂಡ್ಯ ಜಿಲ್ಲೆಯ ಎಲ್ಲಾ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಹಣೆ ಅಧಿಕಾರಿ ನಂದಿನಿ ಸೂಚಿಸಿದ್ದಾರೆ. ಗ್ರಾಮ ಪಂಚಾಯತ್, ತಾಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಸಾರ್ವಜನಿಕ ಕುಂದುಕೊರತೆ ಸಭೆ ಆಯೋಜಿಸಲಾಗುತ್ತಿದೆ. ಸದರಿ ಸಭೆಯಲ್ಲಿ ಸ್ವೀಕೃತವಾಗುವ ಅರ್ಜಿಗಳಿಗೆ

ಸಂಬಂಧಿಸಿದಂತೆ ಪ್ರತಿಯೊಂದು ಅರ್ಜಿಗೂ ತೆಗೆದುಕೊಳ್ಳಲಾದ ಕ್ರಮಗಳ ಬಗ್ಗೆ ವಿವರಗಳೊಂದಿಗೆ ವರದಿಯನ್ನು ನಿಗದಿತ ಅವಧಿಯೊಳಗೆ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

**<><*<><>*><>**

ಇದೇ ೨೬ ರಂದು ಗಣರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಸೂಚಿಸಿದ್ದಾರೆ. ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಬೆಳಗ್ಗೆ ೭ ಗಂಟೆಗೆ ನಗರದ ಕ್ಲಾಕ್ ಟವರ್‌ಲ್ಲಿ ಧ್ವಜಾರೋಹಣ ನಡೆಯಲಿದೆ. ೯ ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಲಿದ್ದಾರೆ ಎಂದು ತಿಳಿಸಿದರು. ಪೊಲೀಸ್ ಇಲಾಖೆ, ಅಬಕಾರಿ ಇಲಾಖೆ, ಅಗ್ನಿಶಾಮಕದಳ ಸೇರಿದಂತೆ ಕವಾಯತು ತಂಡಗಳ ಪಥ ಸಂಚಲನಕ್ಕೆ ಸಿದ್ಧತೆ ಮಾಡಿಕೊಳ್ಳುವಂತೆ  ನಿದೇರ್ಶನ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**